ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎಂಟನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 08ನೇ ಜುಲೈ, 2015
(ಸಮಯ: ಬೆಳಗ್ಗೆ 10.00 ಗಂಟೆಗೆ)

-----

1. ವಿತ್ತೀಯ ಕಾರ್ಯಕಲಾಪಗಳು

ಅ) 2015-16ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಯ ಮೇಲೆ ಚರ್ಚೆ, ಸರ್ಕಾರದ ಉತ್ತರ ಮತ್ತು ಮತಕ್ಕೆ ಹಾಕುವುದು;

ಬೇಡಿಕೆ ಸಂಖ್ಯೆ	ಬೇಡಿಕೆಯ ಹೆಸರು
20	ಲೋಕೋಪಯೋಗಿ

ಆ) 2015-16ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಯ ಮೇಲೆ ನಡೆದ ಚರ್ಚೆಗೆ ಸರ್ಕಾರದ ಉತ್ತರ ಮತ್ತು ಮತಕ್ಕೆ ಹಾಕುವುದು:

ಬೇಡಿಕೆ ಸಂಖ್ಯೆ	ಬೇಡಿಕೆಯ ಹೆಸರು
09	ಸಹಕಾರ

2. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಗೋವಿಂದ ಎಂ.ಕಾರಜೋಳ, ಬಸವರಾಜ ಬೊಮ್ಮಾಯಿ, ಲಕ್ಷ್ಮಣ ಸಂಗಪ್ಪ ಸವದಿ, ಎ.ಎಸ್. ಪಾಟೀಲ್(ನಡಹಳ್ಳಿ), ಎನ್.ಹೆಚ್. ಕೋನರೆಡ್ಡಿ ಹಾಗೂ ಇತರರು ಹೈದ್ರಾಬಾದ್-ಕರ್ನಾಟಕ ಕಲಂ-371(ಜೆ) ಹಾಗೂ ಡಾ|| ಡಿ.ಎಂ. ನಂಜುಂಡಪ್ಪ ಸಮಿತಿಯ ವರದಿ ಸಮರ್ಪಕವಾಗಿ ಅನುಷ್ಠಾನವಾಗದೇ ಇರುವುದರಿಂದ ಉತ್ತರ ಕರ್ನಾಟಕದ 13 ಜಿಲ್ಲೆಗಳಿಗೆ ಅನ್ಯಾಯವಾಗುತ್ತಿರುವ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

2. ಶ್ರೀಯುತರುಗಳಾದ ಹೆಚ್.ಕೆ.ಕುಮಾರಸ್ವಾಮಿ, ಬಿ.ಬಿ.ನಿಂಗಯ್ಯ, ಕೆ.ಜಿ.ಬೋಪಯ್ಯ, ವಿಶ್ವೇಶ್ವರ ಹೆಗಡೆ ಕಾಗೇರಿ, ಸಿ.ಟಿ.ರವಿ ಹಾಗೂ ಇತರರು ಕೊಡಗು, ಚಿಕ್ಕಮಗಳೂರು, ಶಿವಮೊಗ್ಗ, ಹಾಸನ ಮತ್ತು ಕಾರವಾರ ಜಿಲ್ಲೆಗಳಲ್ಲಿ ಬಿದ್ದ ಭಾರೀ ಮಳೆ ಮತ್ತು ಬಿರುಗಾಳಿಯಿಂದಾಗಿ ಬೆಳೆ ನಾಶವಾಗಿ ರೈತರಿಗೆ ಉಂಟಾಗಿರುವ ನಷ್ಟಕ್ಕೆ ಪರಿಹಾರ ನೀಡಲು ವಿಶೇಷ ಪ್ಯಾಕೇಜ್ ಘೋಷಿಸುವಂತೆ ಪ್ರಸ್ತಾಪಿಸಿರುವ ಸೂಚನೆಯ ಬಗ್ಗೆ ಚರ್ಚೆ.

3. ಶ್ರೀಯುತರುಗಳಾದ ಹೆಚ್.ಡಿ.ಕುಮಾರಸ್ವಾಮಿ, ವೈ.ಎಸ್.ವಿ. ದತ್ತ, ಹೆಚ್.ಡಿ.ರೇವಣ್ಣ, ಡಿ.ಸಿ.ತಮ್ಮಣ್ಣ, ಎನ್.ಹೆಚ್. ಕೋನರೆಡ್ಡಿ ಹಾಗೂ ಇತರರು ರಾಜ್ಯದ 13 ಜಿಲ್ಲಾ ಹಾಲು ಒಕ್ಕೂಟಗಳ ವ್ಯಾಪ್ತಿಯಲ್ಲಿ 15000 ಮೆಟ್ರಿಕ್ ಟನ್ ಹಾಲಿನ ಪುಡಿ ದಾಸ್ತಾನಿರುವುದರಿಂದ ಕೋಟ್ಯಂತರ ರೂಪಾಯಿಗಳು ನಷ್ಟವಾಗುತ್ತಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ

4. ಶ್ರೀಯುತರುಗಳಾದ ಕೆ.ಎಸ್. ಪುಟ್ಟಣ್ಣಯ್ಯ, ಅಶೋಕ ಖೇಣಿ ಹಾಗೂ ಸಿ.ಟಿ.ರವಿ ಅವರುಗಳು ರಾಜ್ಯದಲ್ಲಿ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ಪ್ರವೃತ್ತಿಯನ್ನು ತಡೆಗಟ್ಟಲು ರಾಜ್ಯ ಸರ್ಕಾರ ರೈತರಿಗೆ ಅನುಕೂಲವಾಗುವಂತಹ ನೀತಿಯನ್ನು ಕಟ್ಟುನಿಟ್ಟಾಗಿ ಜಾರಿಗೆ ತರದಿರುವ ವಿಷಯದ ಮೇಲೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

೩. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(i) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಕೃಷಿ ಇಲಾಖೆಯ ಅಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ವಿಧೇಯಕ, 2015
ಶ್ರೀ ಕೃಷ್ಣ ಬೈರೇಗೌಡ (ಕೃಷಿ ರಾಜ್ಯ ಸಚಿವರು) ಅವರು;

ಅ) 2015ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಕೃಷಿ ಇಲಾಖೆಯ ಅಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

(ii) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ(ತಿದ್ದುಪಡಿ) ವಿಧೇಯಕ, 2015
ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು) ಅವರು;

ಅ) 2015ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ(ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು:

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎಂಟನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎಂಟನೇ ಪಟ್ಟಿ

5. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಯು.ಬಿ.ಬಣಕಾರ ಅವರು ಹಾವೇರಿ ಜಿಲ್ಲೆ ಹಿರೇಕೆರೂರ ತಾಲ್ಲೂಕು ಹಿರೇಮೊರಬ ಗ್ರಾಮದ ಪ್ರೌಢಶಾಲೆಯನ್ನು ಮುಚ್ಚಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

2. ಶ್ರೀ ವಿ.ಸುನೀಲ್‌ಕುಮಾರ್ ಅವರು ನೂತನವಾಗಿ ರಚನೆಯಾಗಿರುವ ಗ್ರಾಮ ಪಂಚಾಯತಿಗಳಿಗೆ ಕಟ್ಟಡ ಹಾಗೂ ಸಿಬ್ಬಂದಿಗಳ ಕೊರತೆಯಿಂದ ಆಡಳಿತಾತ್ಮಕ ತೊಂದರೆ ಉಂಟಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

3. ಶ್ರೀ ಜಿ.ಎಸ್. ಪಾಟೀಲ್ ಅವರು 2013-14ನೇ ಸಾಲಿನಲ್ಲಿ ಗದಗ ಜಿಲ್ಲೆಯಲ್ಲಿನ ಪ್ರೌಢ ಶಾಲೆಗಳಲ್ಲಿ ಆರ್.ಎಂ.ಎಸ್.ಎ ಯೋಜನೆಯಡಿ ಮಂಜೂರಾದ ಕಟ್ಟಡ ಕಾಮಗಾರಿಗಳು ಸಂಪೂರ್ಣ ಸ್ಥಗಿತಗೊಂಡಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

4. ಶ್ರೀ ಕೆ.ಎಂ.ತಿಮ್ಮರಾಯಪ್ಪ ಅವರು ಪಾವಗಡ ತಾಲ್ಲೂಕಿನಲ್ಲಿ ಗುರುತಿಸಲಾಗಿರುವ ಜೀತದಾರರನ್ನು ಜೀತದಿಂದ ಮುಕ್ತಿಗೊಳಿಸಿ, ಪುನರ್ ವಸತಿ ಸೇರಿದಂತೆ ಇನ್ನಿತರೆ ಸೌಲಭ್ಯವನ್ನು ಕಲ್ಪಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

5. ಶ್ರೀ ಕೆ.ಜಿ.ಬೋಪಯ್ಯ ಅವರು ಮಡಿಕೇರಿ ಜಿಲ್ಲಾ ಆಸ್ಪತ್ರೆಯನ್ನು ವೈದ್ಯಕೀಯ ಶಿಕ್ಷಣ ಇಲಾಖೆಗೆ ಹಸ್ತಾಂತರಿಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

6. ಶ್ರೀಮತಿ ಶಾರದಾ ಪೂರ್ಯ ನಾಯ್ಕ್, ಶ್ರೀ ಪಿಳ್ಳಮುನಿಶಾಮಪ್ಪ ಮತ್ತು ಶ್ರೀ ಎಂ.ರಾಜಣ್ಣ ಅವರುಗಳು ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಪಿ.ಯು.ಸಿ. ವಿದ್ಯಾರ್ಥಿಗಳು ಸಕಾಲದಲ್ಲಿ ಹಾಸ್ಟೆಲ್ ಸೌಲಭ್ಯವನ್ನು ಪಡೆಯಲು ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

7. ಶ್ರೀ ಎಂ.ಟಿ.ಕೃಷ್ಣಪ್ಪ ಅವರು ತುಮಕೂರು ಜಿಲ್ಲೆ ತುರುವೇಕೆರೆ ತಾಲ್ಲೂಕಿನ ಕಸಬಾ ಹೋಬಳಿ ಮಲ್ಲಾಘಟ್ಟ ಕೆರೆಯು ಮೀನು ಸಾಕಾಣಿಕೆಯಿಂದಾಗಿ ಕಲುಷಿತಗೊಂಡಿರುವ ಬಗ್ಗೆ ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರ ಗಮನ ಸೆಳೆಯುವುದು.

8. ಶ್ರೀಯುತರುಗಳಾದ ಸಿ.ಎನ್.ಬಾಲಕೃಷ್ಣ, ವೈ.ಎಸ್.ವಿ. ದತ್ತಾ, ಹೆಚ್.ಕೆ. ಕುಮಾರಸ್ವಾಮಿ, ಕೆ.ಎಂ.ಶಿವಲಿಂಗೇಗೌಡ ಮತ್ತು ಬಿ.ಬಿ. ನಿಂಗಯ್ಯ ಅವರುಗಳು ಹಾಸನ ಜಿಲ್ಲೆಯಾದ್ಯಂತ ಅಕ್ರಮ ಮರಳು ಗಣಿಗಾರಿಕೆ ನಡೆಯುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

9. ಶ್ರೀ ಪಿ.ರಾಜೀವ್ ಅವರು ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ-1 ಮತ್ತು 2ರ ಹಂತದಲ್ಲಿ ಕುಡಚಿ ಮತಕ್ಷೇತ್ರದಲ್ಲಿ ಯಾವುದೇ ರಸ್ತೆ ಅಭಿವೃದ್ಧಿಪಡಿಸದಿರುವುದರಿಂದ ಈ ಸಾಲಿನಲ್ಲಿ 3ನೇ ಹಂತದಲ್ಲಿ ಕಾಗವಾಡ- ಕಲಾದಗಿ ಹಾಗೂ ಮಂಗಸೂಳ್ಳಿ-ಲಕ್ಷ್ಮೇಶ್ವರ ರಸ್ತೆಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

10. ಶ್ರೀ ಹೆಚ್.ಎಸ್.ಶಿವಶಂಕರ ಅವರು ಹರಿಹರ ನಗರದಲ್ಲಿ ಹಾದು ಹೋಗಿರುವ ಬೀರೂರು-ಸಮಸಗಿ ರಾಜ್ಯ ಹೆದ್ದಾರಿ ರಸ್ತೆಯನ್ನು 4 ಪಥದ ರಸ್ತೆಯನ್ನಾಗಿ ಮೇಲ್ದರ್ಜೆಗೇರಿಸಿ ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

11. ಶ್ರೀ ಶಿವಾನಂದ ಎಸ್.ಪಾಟೀಲ್ ಅವರು ಬಸವನ ಬಾಗೇವಾಡಿ ವಿಧಾನಸಭಾ ಕ್ಷೇತ್ರದಲ್ಲಿ ಹೊಸದಾಗಿ ಮೇಲ್ದರ್ಜೆಗೇರಿಸಿರುವ ನಿಡಗುಂದಿ ಮತ್ತು ಮನಗೂಳಿ ಹೋಬಳಿ ಕೇಂದ್ರಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವಲ್ಲಿ ವಿಳಂಬವಾಗಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

12. ಶ್ರೀ ಸಂಜಯ ಬಿ.ಪಾಟೀಲ್ ಅವರು ಅಲ್ಪಸಂಖ್ಯಾತ ಸ್ಥಾನಮಾನ ಪಡೆದ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಂಸ್ಥೆಗಳಿಗೆ ಅನ್ವಯಿಸುವಂತೆ ವಿಧಿಸಿರುವ ಷರತನ್ನು ತಾಂತ್ರಿಕ ಶಿಕ್ಷಣ ಸಂಸ್ಥೆಗಳಿಗೂ ಅನ್ವಯವಾಗುವಂತೆ ಜಾರಿಗೊಳಿಸುವ ಬಗ್ಗೆ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

13. ಶ್ರೀ ಎಂ.ಕೃಷ್ಣಾರೆಡ್ಡಿ ಅವರು ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನಲ್ಲಿ 2014-15ನೇ ಸಾಲಿನಲ್ಲಿ ಮಂಜೂರಾದ 14 ಶುದ್ಧ ಕುಡಿಯುವ ನೀರಿನ ಘಟಕಗಳು ಕಾರ್ಯಾರಂಭ ಮಾಡದಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

14. ಡಾ॥ ವಿಶ್ವನಾಥ ಈ. ಪಾಟೀಲ್ ಅವರು ಬೆಳಗಾವಿ ಜಿಲ್ಲೆಯ ಬೈಲಹೊಂಗಲ ಮತಕ್ಷೇತ್ರ ವ್ಯಾಪ್ತಿಯಲ್ಲಿನ ಚಚಡಿ ಮತ್ತು ಮುರಗೋಡ ಏತ ನೀರಾವರಿ ಯೋಜನೆಗಳ ಅನುಷ್ಠಾನ ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

15. ಶ್ರೀ ಸಿದ್ದು ಬಿ. ನ್ಯಾಮಗೌಡ ಅವರು ಬಾಗಲಕೋಟೆ ಜಿಲ್ಲೆ ಜಮಖಂಡಿ ಪಟ್ಟಣದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇಲ್ಲದಿರುವುದರಿಂದ ವಿದ್ಯಾರ್ಥಿಗಳಿಗೆ ಉಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

16. ಶ್ರೀ ಪ್ರತಾಪಗೌಡ ಪಾಟೀಲ್ ಅವರು ಕೃಷ್ಣಾ ಬಲದಂಡೆ ಮುಖ್ಯ ಕಾಲುವೆಯಿಂದ 5-ಎ ಶಾಖಾ ಕಾಲುವೆ ನಿರ್ಮಾಣ ಯೋಜನೆಯನ್ನು ಜಾರಿಗೊಳಿಸುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

17. ಶ್ರೀಯುತರುಗಳಾದ ಹೆಚ್.ಡಿ.ರೇವಣ್ಣ, ಹೆಚ್.ಕೆ. ಕುಮಾರಸ್ವಾಮಿ ಮತ್ತು ಕೆ.ಎಂ.ಶಿವಲಿಂಗೇಗೌಡ ಅವರುಗಳು ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕು ವ್ಯಾಪ್ತಿಯ ಬಹುತೇಕ ಗ್ರಾಮಗಳಿಗೆ ಬಹುಗ್ರಾಮ ಕುಡಿಯುವ ನೀರು ಯೋಜನೆಯಡಿಯಲ್ಲಿ ಸೌಲಭ್ಯ ಕಲ್ಪಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

18. ಶ್ರೀ ಯಶವಂತರಾಯಗೌಡ ವಿ. ಪಾಟೀಲ್ ಅವರು 1993ರಲ್ಲಿ ಮಹಾರಾಷ್ಟ್ರ ರಾಜ್ಯದ ಉಸ್ಮಾನಾಬಾದ್ ಮತ್ತು ಲಾತೂರು ಜಿಲ್ಲೆಗಳಲ್ಲಿ ಸಂಭವಿಸಿದ ಭೀಕರ ಭೂಕಂಪದಿಂದ ವಿಜಯಪುರ ಜಿಲ್ಲೆಯ ಇಂಡಿ ತಾಲ್ಲೂಕಿನ ಖೇಡಗಿ ಮತ್ತು ಚಿಕ್ಕಮಣ್ಣೂರು ಗ್ರಾಮಗಳ ಮನೆಗಳು ಶಿಥಿಲಗೊಂಡಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,.

19. ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು ಚಿಕ್ಕಬಳ್ಳಾಪುರ ಜಿಲ್ಲೆ ಬಾಗೇಪಲ್ಲಿ ಮತ್ತು ಗುಡಿಬಂಡೆ ತಾಲ್ಲೂಕುಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಾರ್ವಜನಿಕ ಆಸ್ಪತ್ರೆಗಳಲ್ಲಿ ವೈದ್ಯರು ಹಾಗೂ ಸಿಬ್ಬಂದಿಗಳ ಕೊರತೆಯಿಂದ ಉಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

20. ಶ್ರೀ ಗೋವಿಂದ ಎಂ.ಕಾರಜೋಳ ಅವರು ಮುಧೋಳ ತಾಲ್ಲೂಕಿನ ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶಿಕ್ಷಣ ಶುಲ್ಕವನ್ನು ಮರು ಪಾವತಿ ಮಾಡದಿರುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರ ಗಮನ ಸೆಳೆಯುವುದು.

21. ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಉತ್ತರ ಕನ್ನಡ ಜಿಲ್ಲೆಯಲ್ಲಿ ಸಿಬ್ಬಂದಿಗಳ ಕೊರತೆಯಿಂದಾಗಿ ಆಧಾರ್ ಕಾರ್ಡ್ ವಿತರಣೆಗೆ ಅಡಚಣೆಯಾಗಿರುವುದರಿಂದ ಸಾರ್ವಜನಿಕರಿಗೆ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

22. ಶ್ರೀ ಎನ್.ಹೆಚ್.ಕೋನರೆಡ್ಡಿ ಅವರು ನಗರ ಸ್ಥಳೀಯ ಸಂಸ್ಥೆಗಳ ಸಿಬ್ಬಂದಿ ಮತ್ತು ನೇಮಕಾತಿ ನಿಯಮಾವಳಿ 2010ಕ್ಕೆ ತಿದ್ದುಪಡಿ ತರುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

23. ಶ್ರೀ ನಾರಾಯಣಗೌಡ ಅವರು ಕೆ.ಆರ್. ಪೇಟೆ ವಿಧಾನಸಭಾ ಕ್ಷೇತ್ರಕ್ಕೆ ಮಂಜೂರಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಕಾಮಗಾರಿಗಳು ಕಳಪೆ ಗುಣಮಟ್ಟದ್ದಾಗಿರುವ ಬಗ್ಗೆ ಹಾಗೂ ಐದು ಹೊಸ ಘಟಕಗಳನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

24. ಶ್ರೀ ದೊಡ್ಡನಗೌಡ ಹೆಚ್.ಪಾಟೀಲ್ ಅವರು ಬಿಳೆಕಲ್ ಗ್ರಾಮದಲ್ಲಿ ಎರಡು ಗುಂಪಿನ ನಡುವೆ ನಡೆದ ಘರ್ಷಣೆಯಲ್ಲಿ ನಿರಪರಾಧಿಗಳ ಮೇಲೆ ಸುಳ್ಳು ಪ್ರಕರಣ ದಾಖಲಿಸಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

25. ಡಾ॥ ಎ.ಬಿ. ಮಾಲಕರೆಡ್ಡಿ ಅವರು ಯಾದಗಿರಿ ಜಿಲ್ಲೆಯಲ್ಲಿ ಅನಾವೃಷ್ಟಿಯಿಂದಾಗಿ ರೈತರು ಗುಳೆ ಹೋಗುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

26. ಶ್ರೀ ಕೆ.ಎಂ.ಶಿವಲಿಂಗೇಗೌಡ ಅವರು ರೈತರು ತುಂಡು ಭೂಮಿಯನ್ನು ಮಾರಾಟ ಮತ್ತು ವಿಭಾಗ ಮಾಡಿಕೊಳ್ಳುವ ಪ್ರತಿ ಜಮೀನಿಗೆ ಖಾತೆ ಮಾಡಿಸುವಾಗ 1200ರೂ.ಗಳನ್ನು ಪಾವತಿಸಬೇಕಾಗಿರುವುದರಿಂದ ರೈತರಿಗೆ ಉಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

ಎಂ.ಗುರುರಾಜ

ಕಾರ್ಯದರ್ಶಿ

Raj Nagaraju

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.